**ಕರ್ನಾಟಕ ಸರ್ಕಾರ**

ಸಂಖ್ಯೆ: ಡಿಟಿಇ/513/ಎಸಿಎಂ(2)/2017-18

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ:23-05-2018.

**-:: ಸುತ್ತೋಲೆ ::-**

**ವಿಷಯ:-** ಅಭ್ಯರ್ಥಿಗಳು ಪ್ರಥಮ ಡಿಪ್ಲೋಮಾ ಅರ್ಜಿ ನೋಂದಣಿ ಶುಲ್ಕವನ್ನು ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್ "ದಾಖಲೆಗಳ ಪರಿಶೀಲನಾ ಕೇಂದ್ರ"ಗಳಲ್ಲಿ ನಗದು ರೂಪದಲ್ಲಿ ಪಾವತಿಸುವ ಬಗ್ಗೆ.

**ಉಲ್ಲೇಖ:-** 1. ಸರ್ಕಾರದ ಆದೇಶ ಸಂ. ಇಡಿ 111 ಟಿಪಿಇ 2018, ದಿ:22-05-2018.
2. ಈ ಕಛೇರಿ ಸಮ ಸಂಖ್ಯೆ ಅಧಿಸೂಚನೆ ದಿ:05-05-2018.

-000000-

2018-19ನೇ ಸಾಲಿನ ಪ್ರಥಮ ಡಿಪ್ಲೋಮಾ ಪ್ರವೇಶ ಸಂಬಂಧ ಪ್ರವೇಶ ಬಯಸುವ ಅಭ್ಯರ್ಥಿಗಳು ಅರ್ಜಿ ನೋಂದಣಿ ಶುಲ್ಕವನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಬ್ಯಾಂಕ್ ಖಾತೆಗೆ ಪಾವತಿಸಿ, ಬ್ಯಾಂಕ್ ಚಲನ್‌ನ್ನು ಪಡೆದು ಸಮೀಪವಿರುವ ಯಾವುದಾದರು ಒಂದು ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್ "ದಾಖಲೆಗಳ ಪರಿಶೀಲನಾ ಕೇಂದ್ರ"ದಲ್ಲಿ ಸಲ್ಲಿಸಲು ಉಲ್ಲೇಖ(2)ರ ಪ್ರವೇಶಾಧಿಸೂಚನೆಯಲ್ಲಿ ಪ್ರಕಟಿಸಲಾಗಿತ್ತು. ಆದರೆ, ತಾಂತ್ರಿಕ ತೊಂದರೆಗಳಿಂದಾಗಿ ವಿದ್ಯಾರ್ಥಿಗಳು ಅರ್ಜಿ ನೋಂದಣಿ ಶುಲ್ಕವನ್ನು ಪಾವತಿಸಲು ಈ ಕೆಳಕಂಡಂತೆ ಬದಲಾವಣೆ ಮಾಡಲಾಗಿದೆ.

**ಅಭ್ಯರ್ಥಿಗಳು ಅರ್ಜಿ ನಮೂನೆ ಹಾಗೂ ಮಾಹಿತಿ ಪುಸ್ತಕವನ್ನು ತಾಂತ್ರಿಕ ಶಿಕ್ಷಣ ಇಲಾಖೆಯ www.dte.kar.nic.in ವೆಬ್‌ಸೈಟ್‌ನ ಮೂಲಕ ಡೌನ್‌ಲೋಡ್ ಮಾಡಿಕೊಂಡು ಡಿಪ್ಲೋಮಾ ಅರ್ಜಿ ನೋಂದಣಿ ಶುಲ್ಕವನ್ನು ಸಮೀಪವಿರುವ ಯಾವುದಾದರು ಒಂದು ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್ "ದಾಖಲೆಗಳ ಪರಿಶೀಲನಾ ಕೇಂದ್ರ"ದಲ್ಲಿ (ಸಾಮಾನ್ಯ/2ಎ/2ಬಿ/3ಎ/3ಬಿ = ₹ 100/- & ಪ.ಜಾ/ಪ.ಪಂ/ ಪ್ರವರ್ಗ-1 = ₹ 50/-) ನಗದು ರೂಪದಲ್ಲಿ ಪಾವತಿಸಲು ಉಲ್ಲೇಖ(1)ರ ಸರ್ಕಾರದ ಪತ್ರದಲ್ಲಿ ಅನುಮತಿ ನೀಡಲಾಗಿದೆ. ಪ್ರಾಂಶುಪಾಲರು ಅಭ್ಯರ್ಥಿಗಳು ಪಾವತಿಸುವ ಅರ್ಜಿ ನೋಂದಣಿ ಶುಲ್ಕಕ್ಕೆ ಸಾಮಾನ್ಯ ರಶೀದಿ ನೀಡಿ, ರಶೀದಿ ಸಂಖ್ಯೆಯನ್ನು ಅರ್ಜಿಯಲ್ಲಿ ನಮೂದಿಸಲು ಸೂಚಿಸಲಾಗಿದೆ. ಈಗಾಗಲೇ ಅಭ್ಯರ್ಥಿಗಳು ಬ್ಯಾಂಕಿನಲ್ಲಿ ಪಾವತಿಸಿರುವ ಚಲನ್‌ನನ್ನು ಸಹ ಪರಿಗಣಿಸಲು ತಿಳಿಸಲಾಗಿದೆ. ಅರ್ಜಿ ಶುಲ್ಕದಿಂದ ಸಂಗ್ರಹವಾಗುವ ಒಟ್ಟು ಹಣವನ್ನು ದಾಖಲಾತಿ ಪರಿಶೀಲನಾ ಕೇಂದ್ರದ ಪ್ರಾಂಶುಪಾಲರು ತಮ್ಮ ಪಿ.ಡಿ ಖಾತೆಗೆ ಜಮೆ ಮಾಡಿಕೊಂಡು, ಪ್ರವೇಶ ಪ್ರಕ್ರಿಯೆ ಮುಗಿದ ನಂತರ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಎಸ್.ಬಿ. ಖಾತೆ ಸಂ. 36843662415 ಗೆ ಒಮ್ಮೆಲೇ ಜಮೆ ಮಾಡಲು ಆದೇಶಿಸಲಾಗಿದೆ.**

ಪ್ರಯುಕ್ತ, ವಿದ್ಯಾರ್ಥಿಗಳಿಗೆ ಅನುಕೂಲವಾಗುವ ದೃಷ್ಟಿಯಿಂದ ಮೇಲ್ಕಂಡಂತೆ ಕೂಡಲೇ ಕ್ರಮಕೈಗೊಂಡು ಈ ಸಂಬಂಧ ಸಂಸ್ಥೆಯ ಸೂಚನಾ ಫಲಕದಲ್ಲಿ ಹಾಗೂ ಸ್ಥಳೀಯವಾಗಿ ಪ್ರಕಟಣೆ ನೀಡಲು ಸೂಚಿಸಲಾಗಿದೆ.

ನಿರ್ದೇಶಕರು

**ಇವರಿಗೆ,**

*ರಾಜ್ಯದ ಎಲ್ಲಾ ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್ ಪ್ರಾಂಶುಪಾಲರುಗಳಿಗೆ – ಸೂಕ್ತ ಮಾಹಿತಿಗಾಗಿ ಹಾಗೂ ಅನುಸರಣೆಗಾಗಿ.*

ಪ್ರತಿ ಮಾಹಿತಿಗಾಗಿ:-

1. ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು
2. ಕಾರ್ಯದರ್ಶಿಗಳು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು.
3. ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ.
4. ನಿರ್ದೇಶಕರ ಆಪ್ತಶಾಖೆಗೆ
5. ಸಾರ್ವಜನಿಕ ಸಂಪರ್ಕಾಧಿಕಾರಿ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
6. ಸಂಯೋಜನಾಧಿಕಾರಿಗಳು, ಇ-ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು – ಸದರಿ ಸುತ್ತೋಲೆಯನ್ನು ನಿರ್ದೇಶನಾಲಯದ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.